# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಮತ್ತಿಕೆರೆ ಉಪವಿಭಾಗದ ವಾರ್ಡ್ ಸಂಖ್ಯೆ:36 ಮತ್ತಿಕೆರೆ

ಕಛೇರಿಯಲ್ಲಿ ದಿನಾಂಕ:07-10-2021 ರಂದು ನಡೆದ ಮೀಟಿಂಗ್ ನಡವಳಿಗಳು

**ವಿಷಯ :** ಪಾಲಿಕೆ ಎಲ್ಲಾ ವಾರ್ಡ್‌ಗಳಲ್ಲಿ "Ward Decentralized Triage and Emergency Response (DETER) " Committee for Covid-19 Management (WDC) ರಚಿಸುವ ಕುರಿತು.

**ಉಲ್ಲೇಖ :** 1. ವಾರ್ಡ್ ಕಮಿಟಿ ನೋಡಲ್ ಅಧಿಕಾರಿಗಳನ್ನು ನೇಮಿಸಿರುವ ಕಛೇರಿ ಆದೇಶದ ಸಂಖ್ಯೆ ಐ12(5)ಪಿ.ಆರ್/35/20–21, ದಿನಾಂಕ : 16.04.2021

2. ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ ನಂ.RD 158 TNR 2020, ದಿನಾಂಕ :07–05–2021
3. ಈ ಕಛೇರಿಯ ಸಭಾ ಸೂಚನೆ ಪತ್ರದ ದಿನಾಂಕ :06–10–2021

---

ಉಲ್ಲೇಖ (1)ರ ಸಭಾ ಸೂಚನಾ ಪತ್ರದ ಅನುಸಾರ ಉಲ್ಲೇಖ (2) ರ ಆದೇಶದ ಅಂಶಗಳನ್ನು ಪರಿಶೀಲಿಸಲು ದಿನಾಂಕ:14-07-2021ರಂದು ಮತ್ತಿಕೆರೆ ವಾರ್ಡ್ ನಂ.36ರ ಕಾರ್ಯಾಲಯದಲ್ಲಿ ವಾರ್ಡ್ ಕಮಿಟಿ ಸಮಿತಿ ಸಭೆಯನ್ನು ಉಲ್ಲೇಖ ಪತ್ರ (3) ರಂತೆ ಬೆಳಗ್ಗೆ 11-30 ಗಂಟೆಗೆ ಕರೆಯಲಾಗಿದ್ದು, ಸದರಿ ಸಭೆಯ ನಡವಳಿಗಳು.

ಸದಸ್ಯರು ಕಾರ್ಯದರ್ಶಿಗಳು ಕಮಿಟಿ ಹಾಗೂ ಸಹಾಯಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದ ಎಲ್ಲರನ್ನು ಸ್ವಾಗತಿಸಿದರು.

ಶ್ರೀ ಜೆ.ಬಿ. ಶ್ರೀಧರ್ ಮೂರ್ತಿ, ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿ, ವಾರ್ಡ್ ಸಂಖ್ಯೆ:36ರ ವಾರ್ಡ್ ಕಮಿಟಿ ರವರು ಮಾತನಾಡುತ್ತಾ, ಸಭೆಯನ್ನು ಪ್ರಾರಂಭಿಸಲಾಗಿತ್ತು, ಉಲ್ಲೇಖ (2) ರ ಆದೇಶವನ್ನು ವಿವರಿಸುತ್ತಾ ವಾರ್ಡ್ ನಂ.36ರಲ್ಲಿ "Ward Decentralized Triage and Emergency Response (DETER)" Committee for Covid-19 Management (WDC) ಯ ಸಮಿತಿ ರಚನೆ ವಾರ್ಡ್ ಮಟ್ಟದ ಕೋವಿಡ್ ನಿರ್ವಹಣೆ WDC (ವಾರ್ಡ್ ತಡೆ ಸಮಿತಿ) ವಿಕೇಂದ್ರೀಕೃತ ಚಿಕಿತ್ಸೆಯ ಸರದಿ ನಿರ್ಧಾರ ಮತ್ತು ತುರ್ತು ಪ್ರತಿಕ್ರಿಯೆ ಕೇಂದ್ರ ರಚನೆ, ಸ್ವರೂಪ, ಕಾರ್ಯವಿಧಾನ, ಅಗತ್ಯತೆ ಹಾಗೂ ಕೋವಿಡ್-19 ರ ನಿಯಂತ್ರಣ ಹಾಗೂ ಚಿಕಿತ್ಸೆ ಸಂಬಂಧ ತೆಗೆದುಕೊಳ್ಳಬೇಕಾದ ಕಾರ್ಯಗಳ ಬಗ್ಗೆ ಸಭೆಗೆ ವಿವರವಾಗಿ ತಿಳಿಸಿದರು.

1. ಹಿಂದಿನ ಸಭೆಗಳಲ್ಲಿ ನಿರ್ಣಯಗಳ ಅನುಪಾಲನೆ ಹಾಗೂ ಸಾರ್ವಜನಿಕರಿಗೆ ಸಮರ್ಪಕ ಸೇವೆ ನೀಡುವ ಬಗ್ಗೆ ಹಿಂದಿನ ಸಭೆಗಳಲ್ಲಿ ತೆಗೆದುಕೊಂಡ ನಿರ್ಧಾರಗಳಿಗೆ ಅನುಪಾಲನೆ ಮತ್ತು ವಾರ್ಡ್‌ನಲ್ಲಿ ಸಾರ್ವಜನಿಕರ ದಿನನಿತ್ಯ ಮೂಲಭೂತ ಸೌಕರ್ಯಗಳು ಹಾಗೂ ಸೇವೆ ಒದಗಿಸುವ ಸಂಬಂಧ ನಿರಂತರವಾಗಿ ಕ್ರಮವಹಿಸಲು ಹಾಜರಿದ್ದ ಎಲ್ಲಾ ಬಿ.ಬಿ.ಎಂ.ಪಿ. ಅಧಿಕಾರಿ ಸಿಬ್ಬಂದಿಯವರಿಗೆ ತಿಳಿಸಿದರು.

ಪು.ತಿ.ನೋ

2. ವಾರ್ಡ್ ಸಂಖ್ಯೆ:36, ಮತ್ತಿಕೆರೆ ವ್ಯಾಪ್ತಿಯ ಆರೋಗ್ಯಾ ವೈದ್ಯಾಧಿಕಾರಿಗಳು ಮಾತನಾಡಿ ಈ ಕೆಳಕಂಡಂತೆ ಕೋವಿಡ್-19ರ ವರದಿಯನ್ನು ನೀಡಿರುತ್ತಾರೆ.

| | |
|---|---|
| H.I | - 18 |
| AC | - 20 |
| Death total | - 51 |
| Hospital | - 02 |

ಪ್ರಸ್ತುತ ಇಂದಿನವರೆಗೂ ಒಟ್ಟು 18ವರ್ಷಕ್ಕಿಂತ ಮೇಲ್ಪಟ್ಟವರಿಗೆ ಒಟ್ಟು 13 driveಗಳನ್ನು ನಡೆಸಲಾಗಿರುತ್ತದೆ. ಕಡ್ಡಾಯವಾಗಿ ಕೋವಿಡ್ ಲಸಿಕೆಯನ್ನು ಬಿ.ಪಿ.ಎಲ್. ಕಾರ್ಡ್‌ದರರು ಎಲ್ಲರಿಗೂ ನೀಡಲಾಗುತ್ತಿದೆ.

| | |
|---|---|
| ಸರ್ಕಾರಿ ಆಸ್ಪತ್ರೆಗಳಲ್ಲಿ ಒಟ್ಟು ಲಸಿಕೆ ಪಡೆದವರು | - 14389 |
| ಖಾಸಗಿ ಆಸ್ಪತ್ರೆಗಳಲ್ಲಿ ಒಟ್ಟು ಲಸಿಕೆ ಪಡೆದವರು | - 16504 |

3. ವಾರ್ಡ್ ಸಂಖ್ಯೆ:36, ಮತ್ತಿಕೆರೆ ವ್ಯಾಪ್ತಿಯ ಘನತ್ಯಾಜ್ಯ ವಿಲೇವಾರಿಗೆ ಸಂಬಂಧಿಸಿದಂತೆ, ಮಾರ್ಷಲ್‌ಗಳು ಒಟ್ಟು 10,000/-ಗಳ ದಂಡ ವಸೂಲಾತಿ ಮಾಡಿರುತ್ತಾರೆ. ಎಂದು ಸಭೆಯಲ್ಲಿ ತಿಳಿಸಿರುತ್ತಾರೆ.

4. ವಾರ್ಡ್ ಸಂಖ್ಯೆ:36, ಮತ್ತಿಕೆರೆ ವ್ಯಾಪ್ತಿಯಲ್ಲಿ ಸರ್ಕಾರಿ ಆಸ್ಪತ್ರೆ ನಿರ್ಮಿಸುವುದು ಅತ್ಯಾವಶ್ಯಕವಾಗಿದ್ದು, ಯಾವುದೇ ಸರ್ಕಾರಿ ಜಾಗವಿಲ್ಲದ ಕಾರಣ, ಕೆ.ಪಿ.ಟಿ.ಸಿ.ಎಲ್. ಆವರಣದಲ್ಲಿ ಆಸ್ಪತ್ರೆಯನ್ನು ನಿರ್ಮಿಸಲು ಕ್ರಮ ಕೈಗೊಳ್ಳಬೇಕೆಂದು ಸಭೆಯಲ್ಲಿ ಚರ್ಚಿಸಲಾಯಿತು.

5. ವಾರ್ಡ್ ಸಂಖ್ಯೆ:36, ಮತ್ತಿಕೆರೆ ವ್ಯಾಪ್ತಿಯ ಸಾರ್ವಜನಿಕ ರಸ್ತೆಗಳಲ್ಲಿರುವ ಬೀದಿ ದೀಪಗಳಿಗೆ ಮರದ ಕೊಂಬೆಗಳು ಹಾಗೂ ಬಳ್ಳಿಗಳು ಸುತ್ತಿಕೊಂಡಿರುತ್ತದೆ. ಆದ್ದರಿಂದ ಮರದ ಕೊಂಬೆಗಳು ಹಾಗೂ ಬಳ್ಳಿಗಳನ್ನು ತೆರವುಗೊಳಿಸಲು ಅಗತ್ಯ ಕ್ರಮಕೈಗೊಳ್ಳುವಂತೆ ಅರಣ್ಯಾ ಇಲಾಖಾ ಅಧಿಕಾರಿಗಳಿಗೆ, ಅಧ್ಯಕ್ಷರು ತಿಳಿಸಿದರು.

6. ವಾರ್ಡ್ ಸಂಖ್ಯೆ:36, ಮತ್ತಿಕೆರೆ ವ್ಯಾಪ್ತಿಯ ಜಯರಾಮ ಕಾಲೋನಿಯಲ್ಲಿ ಬೀದಿ ದೀಪಗಳು ಇಲ್ಲದೇ ಇರುವುದು ತಿಳಿದು ಬಂದ ಹಿನ್ನೆಲೆಯಲ್ಲಿ ಸದರಿ ಕಾಲೋನಿಗೆ ಬೀದಿ ದೀಪಗಳನ್ನು ಒದಗಿಸಲು ಅಗತ್ಯ ಕ್ರಮಕೈಗೊಳ್ಳುವಂತೆ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ, ಅಧ್ಯಕ್ಷರು ತಿಳಿಸಿದರು.

7. ವಾರ್ಡ್ ಸಂಖ್ಯೆ:36, ಮತ್ತಿಕೆರೆ ವ್ಯಾಪ್ತಿಯ ಓಂ ಶಕ್ತಿ ದೇವಸ್ಥಾನದ ರಸ್ತೆ, ಮುನೇಶ್ವರ ದೇವಸ್ಥಾನ, ಸುಬೇದಾರ್‌ಪಾಳ್ಯ ಹಾಗೂ ಮಾಸ್ಕ ಹತ್ತಿರ ರಾತ್ರಿ ವೇಳೆಯಲ್ಲಿ ಅನೈತಿಕ ಚಟುವಟಿಕೆಗಳು ನಡೆಯುತ್ತಿದ್ದು, ಪೋಲಿಸರು ಈ ಸಮಯದಲ್ಲಿ ಗಸ್ತು ತಿರುಗುತ್ತಿದ್ದರೂ ಸಹ, ಈ ಬಗ್ಗೆ ಯಾವುದೇ ಕ್ರಮ ಕೈಗೊಂಡಿರುವುದಿಲ್ಲ. ಎಂದು ಸಭೆಯಲ್ಲಿ ಹಾಜರಿದ್ದ ಸದಸ್ಯರುಗಳು ಪ್ರಸ್ತಾಪ ಮಾಡಿರುತ್ತಾರೆ, ಮುಂದುವರೆದು, ಅಧ್ಯಕ್ಷರು ಈ ಬಗ್ಗೆ ಮಾತನಾಡಿ ಪೊಲೀಸ್ ಇಲಾಖೆಯ ಅಧಿಕಾರಿಗಳಿಗೆ ಕ್ರಮ ಕೈಗೊಳ್ಳಲು ಸೂಚಿಸಿರುತ್ತಾರೆ.

ಮು.ತಿ.ನೋ

8. ವಾರ್ಡ್ ಸಂಖ್ಯೆ:36, ಮತ್ತಿಕೆರೆ ವ್ಯಾಪ್ತಿಯಲ್ಲಿ ನಡೆದ ಸಭೆಯಲ್ಲಿ ಕಂದಾಯ ಇಲಾಖೆ ಅಧಿಕಾರಿ ರವರು ಸ್ವತ್ತಿನ ಮಾಲೀಕರುಗಳಿಂದ ಚಾಲ್ತಿಯಲ್ಲಿರುವ ಕಾಯ್ದೆ ಅನ್ವಯ ಕಂದಾಯವನ್ನು ಪಾವತಿಸಿಕೊಳ್ಳಲು ಅಧ್ಯಕ್ಷರು ತಿಳಿಸಿದರು.

9. ವಾರ್ಡ್ ಸಂಖ್ಯೆ:36, ಮತ್ತಿಕೆರೆ ವ್ಯಾಪ್ತಿಯಲ್ಲಿರುವ ಅಂಗನವಾಡಿ ಕೇಂದ್ರದ ಕಟ್ಟಡವನ್ನು ಸಹಾಯಕ ಕಾರ್ಯಪಾಲಕ ಅಭಿಯಂತರರು ಸುಪರ್ದಿಗೆ ಪಡೆದುಕೊಳ್ಳುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು.

10. ವಾರ್ಡ್ ಸಂಖ್ಯೆ:36, ಮತ್ತಿಕೆರೆ ವ್ಯಾಪ್ತಿಯಲ್ಲಿರುವ ಆರ್.ಕೆ. ಗಾರ್ಡನ್‌ನಲ್ಲಿ 100.00ಮೀ ಪೈಪ್‌ಲೈನ್ ಅಳವಡಿಸುವ ಬಗ್ಗೆ ಬಿ.ಡಬ್ಲ್ಯೂ.ಎಸ್.ಎಸ್.ಬಿ. ಇಲಾಖೆರವರೊಂದಿಗೆ ಚರ್ಚಿಸಲಾಯಿತು.

11. ವಾರ್ಡ್ ಸಂಖ್ಯೆ:36, ಮತ್ತಿಕೆರೆ ವ್ಯಾಪ್ತಿಯಲ್ಲಿ ಬೆಸ್ಕಾಂ ಇಲಾಖೆಯಿಂದ ಎಲ್.ಎನ್.ಟಿ ಕಾಮಗಾರಿ ನಡೆಯುತ್ತಿದ್ದು, ಪೋಲ್‌ಗಳನ್ನು ರಸ್ತೆಗಳಲ್ಲಿ ಎಲ್ಲೆಂದರಲ್ಲಿ ಹಾಕಿದ್ದು, ಇದರಿಂದ ಸಾರ್ವಜನಿಕರು ಹಾಗೂ ವಾಹನ ಸವಾರರ ಓಡಾಟಕ್ಕೆ ತೊಂದರೆಯಾಗುತ್ತಿರುತ್ತದೆ ಎಂದು ಸಭೆಯಲ್ಲಿ ದೂರು ಬಂದ ಹಿನ್ನೆಲೆಯಲ್ಲಿ ಅಧ್ಯಕ್ಷರು ಈ ಬಗ್ಗೆ ಬೆಸ್ಕಾಂ ಅಧಿಕಾರಿಗಳೊಂದಿಗೆ ಮಾತನಾಡಿ, ಕೂಡಲೇ ಈ ಬಗ್ಗೆ ಕ್ರಮ ಕೈಗೊಳ್ಳಲು ತಿಳಿಸಿರುತ್ತಾರೆ.

12. ವಾರ್ಡ್ ಸಂಖ್ಯೆ:36, ಮತ್ತಿಕೆರೆ ವ್ಯಾಪ್ತಿಯ ಘನತ್ಯಾಜ್ಯ ವಿಲೇವಾರಿಗೆ ಸಂಬಂಧಿಸಿದಂತೆ ವಾರ್ಡಿನಲ್ಲಿರುವ 4 ಬ್ಲಾಕ್ ಸ್ಪಾಟ್‌ಗಳನ್ನು ತೆರವುಗೊಳಿಸಲು ಹಿಂದಿನ ಸಭೆಯಲ್ಲಿ ಸೂಚಿಸಿದ್ದರೂ ಸಹಾ ಇದುವರೆವಿಗೂ ಬ್ಲಾಕ್ ಸ್ಪಾಟ್‌ಗಳು ಕಡಿಮೆಯಾಗಿರುವುದಿಲ್ಲವೆಂದು ಅಧ್ಯಕ್ಷರು ತಿಳಿಸಿ, ಸಂಬಂಧಪಟ್ಟ ಅಧಿಕಾರಿಗಳು ಈ ಬಗ್ಗೆ ಅಗತ್ಯ ಕ್ರಮಕೈಗೋಳ್ಳಲು ರವರು ಸೂಚಿಸಿದರು.

ಈ ಎಲ್ಲಾ ಕ್ರಮಗಳನ್ನು ತ್ವರಿತವಾಗಿ, ಆದ್ಯತೆ ಮೇಲೆ ಕೈಗೊಂಡು ಮುಂಬರುವ ಸಭೆಯಲ್ಲಿ ಮಂಡಿಸಲು ಸೂಚಿಸಿ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ವಂದನೆಗಳೊಂದಿಗೆ,

Sushma.M

(ಸುಷ್ಮಾ)
ಸದಸ್ಯ ಕಾರ್ಯದರ್ಶಿ,
ಹಾಗೂ ಸಹಾಯಕ ಅಭಿಯಂತರರು,
ವಾರ್ಡ್ ಸಂಖ್ಯೆ:36, ಮತ್ತಿಕೆರೆ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

(ಜೆ.ಬಿ.ಶ್ರೀಧರ್ ಮೂರ್ತಿ)).
ಅಧ್ಯಕ್ಷರು,
ವಾರ್ಡ್ ಸಂಖ್ಯೆ:36, ಮತ್ತಿಕೆರೆ.